**ಕರ್ನಾಟಕ ಸರ್ಕಾರ**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 11–08–2021**

# ಮಾಧ್ಯಮ ಆಹ್ವಾನ

**PRESS INTIMATION**

**ಗ್ರಂಥಪಾಲಕರ ದಿನಾಚರಣೆ –2021 ಅಂಗವಾಗಿ ಪುಸ್ತಕ ಪ್ರದರ್ಶನ**

**ಉದ್ಘಾಟನೆ:**

**ಬಿ.ಸಿ.ನಾಗೇಶ್,**

**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಪ್ರಾಥಮಿಕ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ**

**ದಿನಾಂಕ: 12–07–2021, ಗುರುವಾರ, ಸಮಯ: ಬೆಳಿಗ್ಗೆ 10.30 ಗಂಟೆಗೆ**

**ಸ್ಥಳ: ರಾಜ್ಯ ಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ, ಬೆಂಗಳೂರು.**

# ಪತ್ರಿಕಾ ಪ್ರಕಟಣೆ

**PRESS RELEASE**

## ಮಾಧ್ಯಮ ಪ್ರತಿನಿಧಿಗಳ ಗಮನಕ್ಕೆ

ಬೆಂಗಳೂರು, ಆಗಸ್ಟ್ 11 (ಕರ್ನಾಟಕ ವಾರ್ತೆ):

ರಾಜ್ಯ ಸರ್ಕಾರದ ನಿರ್ದೇಶನದ ಅನ್ವಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಕಳೆದ ಮೇ 17, 18 ಹಾಗೂ 19 ರಂದು ಮಾಧ್ಯಮ ಪ್ರತಿನಿಧಿಗಳಿಗೆ ಕೋವಿಡ್-19 ಮೊದಲ ಲಸಿಕೆಯನ್ನು ನೀಡಲಾಗಿದೆ.

ಎರಡನೇ ಲಸಿಕೆಯನ್ನು ಪಡೆಯಲು ಆರೋಗ್ಯ ಇಲಾಖೆಯ ನಿರ್ದೇಶನದಂತೆ 84 ದಿನಗಳನ್ನು ಪೂರೈಸಿದ್ದು, ಆಗಸ್ಟ್ 12, 13 ಮತ್ತು 14 ರಂದು ಕಬ್ಬನ್ ಪಾರ್ಕ್ ನಲ್ಲಿರುವ ಪ್ರೆಸ್ ಕ್ಲಬ್ ಆಫ್, ಬೆಂಗಳೂರು ಆವರಣದಲ್ಲಿ ವ್ಯವಸ್ಥೆ ಮಾಡಲಾಗಿದೆ.

ಈ ಅವಧಿಯಲ್ಲಿ ಈಗಾಗಲೇ ಮೊದಲ ಲಸಿಕೆ ಪಡೆದಿರುವ ಮಾಧ್ಯಮ ಪ್ರತಿನಿಧಿಗಳು ಎರಡನೇ ಲಸಿಕೆಯನ್ನು ತಪ್ಪದೇ ಪಡೆಯಲು ಕೋರಿದೆ ಹಾಗೂ ಎರಡನೇ ಲಸಿಕೆಗೆ ಮಾತ್ರ ಅವಕಾಶವಿರುತ್ತದೆ ಎಂದು ತಿಳಿಸಲು ಇಚ್ಛಿಸಿದೆ.

## ರಾಜ್ಯಪಾಲರಿಂದ ರೆಡ್ ಕ್ರಾಸ್ ನೂತನ ಸಂಚಾರಿ ರಕ್ತ ಸಂಗ್ರಹಣ ವಾಹನಕ್ಕೆ ಚಾಲನೆ

ಬೆಂಗಳೂರು, ಆಗಸ್ಟ್ 11 (ಕರ್ನಾಟಕ ವಾರ್ತೆ):

ಗೌರವಾನ್ವಿತ ರಾಜ್ಯಪಾಲರು ಹಾಗೂ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆಯ ಅಧ್ಯಕ್ಷರಾದ ಥಾವರ್ ಚಂದ್ ಗೆಹ್ಲೋಟ್ ರವರು ಸಾರ್ವಜನಿಕ ಸ್ಥಳಗಳಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರಗಳು ಆಯೋಜಿಸಲು ಸಹಕಾರಿಯಾಗುವ ಸಂಚಾರಿ ರಕ್ತ ಸಂಗ್ರಹಣ ವಾಹನಕ್ಕೆ ರಾಜಭವನದಲ್ಲಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ರೋಟರಿ ಬೆಂಗಳೂರು ದಕ್ಷಿಣ ಸಂಸ್ಥೆಯು 46 ಲಕ್ಷ ರೂ ಮೌಲ್ಯದ ಸಂಚಾರಿ ರಕ್ತಸಂಗ್ರಹಣ ವಾಹನವನ್ನು ಭಾರತೀಯ ರೆಡ್ ಕ್ರಾಸ್ ಸಂಸ್ಥೆಗೆ ದಾನವಾಗಿ ನೀಡಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ರಾಜ್ಯಪಾಲರು ರೆಡ್ ಕ್ರಾಸ್ ಸಂಸ್ಥೆಯು ಮಾನವೀಯ ಮೌಲ್ಯಗಳನ್ನು ಎತ್ತಿಹಿಡಿಯುವ ಅಂತರಾಷ್ಟ್ರೀಯ ಸೇವಾ ಸಂಸ್ಥೆಯಾಗಿದೆ. ಇವರೊಂದಿಗೆ ರೋಟರಿ ಸಂಸ್ಥೆ ಕಾರ್ಯನಿರ್ವಹಿಸುತ್ತಿರುವುದು ಶ್ಲಾಘನೀಯ ಎಂದರು.

ಕೋವಿಡ್-19 ಸೋಂಕಿನ ಪರಿಣಾಮ, ಸ್ವಯಂಪ್ರೇರಿತ ರಕ್ತದಾನ ಶಿಬಿರಗಳನ್ನು ಆಯೋಜಿಸುತ್ತಿದ್ದ ಬಹುತೇಕ ಸಂಸ್ಥೆಗಳಲ್ಲಿ ಸ್ವಯಂಪ್ರೇರಿತ ರಕ್ತದಾನ ಶಿಬಿರಗಳು ಇಳಿಮುಖವಾಗಿದೆ. ಸಂಚಾರಿ ರಕ್ತ ಸಂಗ್ರಹಣ ವಾಹನದ ಲಭ್ಯತೆಯೂ ರಕ್ತ ಅಗತ್ಯವಿರುವವರಿಗೆ ರಕ್ತ ಒದಗಿಸುವ ಕಾರ್ಯಕ್ಕೆ ಸಂಜೀವಿನಿಯಾಗಿದೆ.

ಸಾರ್ವಜನಿಕ ಸ್ಥಳಗಳಲ್ಲಿ ರಕ್ತದ ಅಗತ್ಯತೆಯ ಬಗ್ಗೆ ಅರಿವು ಮೂಡಿಸುವುದು, ರಕ್ತದಾನ ಮಾಡಲು ಪ್ರೇರೇಪಿಸುವುದರ ಮೂಲಕ ರಕ್ತ ಸಂಗ್ರಹಣೆ ಮಾಡುವುದು ಸಂಚಾರಿ ರಕ್ತಸಂಗ್ರಹಣ ವಾಹನದ ಮೂಲ ಉದ್ದೇಶವಾಗಿದೆ. ಏಕಕಾಲದಲ್ಲಿ ನಾಲ್ಕು ಮಂದಿ ರಕ್ತದಾನ ಮಾಡಲು ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಹೊಂದಿರುವುದು ಈ ವಾಹನದ ವಿಶೇಷತೆಯಾಗಿದೆ. ಒಂದು ದಿನದಲ್ಲಿ ಸುಮಾರು 100 ಕ್ಕೂ ಹೆಚ್ಚು ರಕ್ತದ ಯೂನಿಟ್ ಗಳನ್ನು ಸಂಗ್ರಹಿಸುವ ಸಾಮರ್ಥ್ಯವನ್ನು ಈ ವಾಹನವು ಒಳಗೊಂಡಿದೆ.

ಕಾರ್ಯಕ್ರಮದಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆಯ ಸಭಾಪತಿಗಳಾದ ಎಸ್. ನಾಗಣ್ಣ ಉಪಸಭಾಪತಿಗಳಾದ ಡಾ.ಕುಮಾರ್ ವಿ.ಎಲ್.ಎಸ್., ರಾಜ್ಯಪಾಲರಿಂದ ನಾಮನಿರ್ದೇಶನಗೊಂಡ ಬಾಲಕೃಷ್ಣ ಶೆಟ್ಟಿ ಹಾಗೂ ಪ್ರಧಾನ ಕಾರ್ಯದರ್ಶಿಗಳಾದ ಹೆಚ್.ಎಸ್. ಬಾಲಸುಬ್ರಹ್ಮಣ್ಯ, ವಾಹನವನ್ನು ದೇಣಿಗೆಯಾಗಿ ನೀಡಿದ ರೋಟರಿ ಬೆಂಗಳೂರು ದಕ್ಷಿಣ ಸಂಸ್ಥೆಯ ನಿರ್ಗಮಿತ ಜಿಲ್ಲಾ ಗವರ್ನರ್ ವಿ.ಎಲ್. ನಾಗೇಂದ್ರ ಪ್ರಸಾದ್, ನಿರ್ಗಮಿತ ರೋಟರಿ ಜಿಲ್ಲಾ ಅಧ್ಯಕ್ಷರಾದ ಶ್ರೀನಿವಾಸ ಟಿ., ಶ್ರೀಧರ್. ಬಿ.ಆರ್. ಹಾಲಿ ಜಿಲ್ಲಾ ಗವರ್ನರ್ ಫಸಲ್ ಮೊಹಮ್ಮದ್, ನಿರ್ಗಮಿತ ಜಿಲ್ಲಾ ಗವರ್ನರ್ ಕೆ.ಪಿ.ನಾಗೇಶ್ ಮತ್ತು ಶ್ರೀನಿವಾಸಮೂರ್ತಿ ರವರು ಈ ಉದ್ಘಾಟನಾ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## The Hon. Governor of Karnataka flagged off the blood collection and transportation bus at Raj Bhavan

Bengaluru, August 11 (Karnataka Information):

Shri. Thawar Chand Gehlot, the Honourable Governor of Karnataka and President of the Indian Red Cross Society (IRCS), Karnataka State Branch(KSB), flagged off the Blood Collection and Transportation Bus, which was donated by Rotary Bengaluru South (District 3190) at Raj Bhavan.

Due to the devastating COVID-19 pandemic, the number of voluntary blood donation camps have come down.

To overcome the present Covid-19 challenge, Rotary Bengaluru South District 3190 has donated a four bedded blood collection and transportation bus worth 46 lakhs to the Indian Red Cross Society, Karnataka State Branch. The unique feature of the bus is that we can set up a Blood Donation Camp anywhere in 15 minutes, allowing four individuals to donate blood simultaneously. A single day can collect over 100 units on average.

The office bearers of IRCS, KSB, S. Naganna, Chairman, Dr. Kumar.V.L.S, Vice-Chairman, Anand S. Jigajinni, Hon. Treasurer, Governor nominee AB Shetty and H.S. Balasubramanya, General Secretary were present during the program.

Rotary Bengaluru South representatives, including immediate past District Governor Nagendra Prasad.V.L, immediate past President Srinivas.T, and former president Sridhar.B.R, current Rotary

District Governor, Fazal Mahmoud, Past District Governor K.P. Nagesh, Sri. Srinivasa Murthy were present during the occasion.

PHOTO CAPTION:

Bengaluru, August 11 (Karnataka Information):

1. ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಇಂದು ರಾಜಭವನದಲ್ಲಿ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವೈದ್ಯಕ್ಷೀಯ ಶಿಕ್ಷಣ ಸಚಿವರಾದ ಡಾ. ಕೆ ಸುಧಾಕರ್ ಅವರು ಭೇಟಿ ಮಾಡಿದರು.

Dr. K Sudhakar, Hon'ble Minister of Medical Education and Health, GOK paid a courtesy call on Shri Thaawarchand Gehlot, Hon'ble Governor of Karnataka at Raj Bhavan today

2. Karnataka Minister for PWD,Mr C C Patil visited at Karnataka Bhavan in New Delhi and observed (Main Building) construction work progress on August-11.

3. Former Minister Mr H Vishwanath who is also the president of "Shepherds India International Annual Governing Body Meeting"and Senior Congress Leader Mr H M Revanna are seen at "Shepherds India International Annual Governing Body Meeting" held at Karnataka Sangha in New Delhi on August-11. Shepherds community Leaders from other states were also present.

## ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 11 (ಕರ್ನಾಟಕ ವಾರ್ತೆ):

ನಗರಾಭಿವೃದ್ಧಿ ಸಚಿವರು ಹಾಗೂ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಎ.ಬಸವರಾಜ ಅವರು ಆಗಸ್ಟ್ 14 ಮತ್ತು 15 ರಂದು ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ದಾಖಲೆ ಪರಿಶೀಲನೆ ಮತ್ತು ಪ್ರಾವೀಣ್ಯತೆ ಪರೀಕ್ಷೆಯ ಎರಡನೇ ಪಟ್ಟಿ ಪ್ರಕಟ

ಬೆಂಗಳೂರು, ಆಗಸ್ಟ್ 11 (ಕರ್ನಾಟಕ ವಾರ್ತೆ):

ನವದೆಹಲಿಯ ಕರ್ನಾಟಕ ಭವನದಲ್ಲಿ ವಿವಿಧ ವೃಂದಗಳಲ್ಲಿ ಖಾಲಿಯಿರುವ 32 ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಸಂಬಂಧ ವಿವಿಧ ಹುದ್ದೆಗಳಾದ ಕಿಚನ್‌ಮೇಟ್, ರೂಂ ಬಾಯ್ / ಬೇರರ್, ಹುದ್ದೆಗಳಿಗೆ ಬೆಂಗಳೂರಿನ ಹೈಗ್ರೌಂಡ್ಸ್ ಕುಮಾರ ಕೃಪ ಅತಿಥಿ ಗೃಹದಲ್ಲಿ ಆಗಸ್ಟ್ 24 ಮಂಗಳವಾರದಂದು ಬೆಳಿಗ್ಗೆ 9.00 ಗಂಟೆಗೆ ದಾಖಲೆ ಪರಿಶೀಲನೆ ಹಾಗೂ ಅಂದೇ 11.00 ಗಂಟೆಗೆ ಪ್ರಾವೀಣ್ಯತೆ ಪರೀಕ್ಷೆಯನ್ನು ನಡೆಸಲಾಗುವುದು. ಹಾಗೂ ಸಹಾಯಕ ವ್ಯವಸ್ಥಾಪಕರು, ಸ್ವಾಗತಕಾರರು / ದೂರವಾಣಿ ಪ್ರವರ್ಧಕರು, ಪ್ಯೂನ್–ಕಂ–ವಾಚ್‌ಮೆನ್, ಗಾರ್ಡನರ್ /ಸ್ವೀಪರ್ ಹುದ್ದೆಗಳಿಗೆ ಮಧ್ಯಾಹ್ನ 2.30ಕ್ಕೆ ದಾಖಲೆ ಪರಿಶೀಲನೆ ನಡೆಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆಲವೊಂದು ಪ್ರವರ್ಗದ ಹುದ್ದೆಗಳಿಗೆ ಅಭ್ಯರ್ಥಿಗಳು ಆಯ್ಕೆಯಾಗದ ಕಾರಣ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಅರ್ಹ ಅಭ್ಯರ್ಥಿಗಳ ದಾಖಲೆ ಪರಿಶೀಲನೆಗಾಗಿ ಹಾಗೂ ಪ್ರಾವೀಣ್ಯತೆ ಪರೀಕ್ಷೆಗಾಗಿ (ಅನ್ವಯಿಸುವ ಹುದ್ದೆಗಳಿಗೆ ಮಾತ್ರ) ಹೆಚ್ಚುವರಿ

ಅಭ್ಯರ್ಥಿಗಳ ಎರಡನೇ ಆಯ್ಕೆ ಪಟ್ಟಿಯನ್ನು www.karnatakabhavan.karnataka.gov.in ರಲ್ಲಿ ದಿನಾಂಕ:10.08.2021 ರಂದು ಪ್ರಕಟಿಸಲಾಗಿದೆ.

ದಾಖಲೆ ಪರಿಶೀಲನೆಗೆ ಹಾಗೂ ಪ್ರಾವೀಣ್ಯತೆ ಪರೀಕ್ಷೆಗಾಗಿ (ಅನ್ವಯಿಸುವ ಹುದ್ದೆಗಳಿಗೆ ಮಾತ್ರ) ಆಯ್ಕೆಯಾಗಿರುವ ಅಭ್ಯರ್ಥಿಗಳ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಬಾಧಿತರಾಗಬಹುದಾದ ಅಭ್ಯರ್ಥಿಗಳು ದಾಖಲೆ ಪರಿಶೀಲನೆಗೆ ಮತ್ತು ಪ್ರಾವೀಣ್ಯತೆ ಪರೀಕ್ಷೆಗಾಗಿ ಆಯ್ಕೆ ಮಾಡಿರುವ ಅಭ್ಯರ್ಥಿಗಳ ಪಟ್ಟಿಗೆ ಆಕ್ಷೇಪಣೆಗಳೇನಾದರೂ ಇದ್ದರೆ ದಿನಾಂಕ: 18.08.2021 ರ ಸಂಜೆ : 5-30 ರೊಳಗೆ ಅಧ್ಯಕ್ಷರು, ನೇರ ನೇಮಕಾತಿ ಆಯ್ಕೆ ಸಮಿತಿ ಹಾಗೂ ಉಪ ನಿವಾಸಿ ಆಯುಕ್ತರು(ಹೆಚ್.ಕೆ), ಕರ್ನಾಟಕ ಭವನ(ಕಾವೇರಿ), 10, ಕೌಟಿಲ್ಯಮಾರ್ಗ, ಚಾಣಕ್ಯಪುರಿ, ನವದೆಹಲಿ-110021 ರವರಿಗೆ ತಲುಪುವಂತೆ ಲಿಖಿತವಾಗಿ ಕಳುಹಿಸುವುದು ಅಥವಾ ಇ-ಮೇಲ್ ವಿಳಾಸ : dyrckb@gmail.com ಗೆ ಕಳುಹಿಸುವುದು. ನಿಗದಿತ ಸಮಯದ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಈ ಮೂಲಕ ತಿಳಿಸಲಾಗಿದೆ.

**ಅಭ್ಯರ್ಥಿಗಳಿಗೆ ಅನುಸರಿಸಬೇಕಾದ ವಿಶೇಷ ಸೂಚನೆಗಳು :**

ದಾಖಲೆ ಪರಿಶೀಲನೆಗೆ ಮತ್ತು ಪ್ರಾವೀಣ್ಯತೆ ಪರೀಕ್ಷೆಗಾಗಿ (ರೂಂ ಬಾಯ್ / ಬೇರರ್ ಮತ್ತು ಕಿಚನ್‌ಮೇಟ್‌ಗೆ) ಪ್ರಕಟಿಸಿರುವ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ಮೇಲಿನ ವೇಳಾಪಟ್ಟಿಯಂತೆ ದಾಖಲೆ ಪರಿಶೀಲನೆ ಮತ್ತು ಪ್ರಾವೀಣ್ಯತೆ ಪರೀಕ್ಷೆಗೆ ಹಾಜರಾಗುವುದು. ನೇಮಕಾತಿ ಅಧಿಸೂಚನೆಯಲ್ಲಿ **7.2** ಪ್ರಾವೀಣ್ಯತೆ ಪರೀಕ್ಷೆ ಶೀರ್ಷಿಕೆಯಡಿಯಲ್ಲಿ ತಿಳಿಸಿರುವಂತೆ ನವದೆಹಲಿಯ ಕರ್ನಾಟಕ ಭವನವು ಅಭ್ಯರ್ಥಿಗಳೊಂದಿಗೆ ವೈಯಕ್ತಿಕವಾಗಿ ಯಾವುದೇ ಪತ್ರ ವ್ಯವಹಾರ ನಡೆಸಲಾಗುವುದಿಲ್ಲ. ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿಯ ಎಲ್ಲಾ ಮೂಲ ದಾಖಲೆಗಳು ಮತ್ತು ಒಂದು ಜೊತೆ (ONE SET) ಜೆರಾಕ್ಸ್ ಪ್ರತಿಗಳೊಂದಿಗೆ ನಿಗದಿತ ಸಮಯಕ್ಕೆ ಹಾಜರಾಗತಕ್ಕದ್ದು.

ಅಭ್ಯರ್ಥಿಗಳು ಪ್ರಾವೀಣ್ಯತೆ ಪರೀಕ್ಷೆಗೆ ಹಾಜರಾಗಲು ಭಾವಚಿತ್ರವಿರುವ ಗುರುತಿನ ಚೀಟಿ (ಚುನಾವಣಾ ಐಡಿ/ಆಧಾರ್ ಕಾರ್ಡ್/ಡ್ರೈವಿಂಗ್ ಲೈಸೆನ್ಸ್/ಪಾನ್ ಕಾರ್ಡ್/ಪಾಸ್ ಪೋರ್ಟ್/ಸರ್ಕಾರಿ ನೌಕರರ ಐಡಿ) ಯನ್ನು ಪ್ರಾವೀಣ್ಯತೆ ಪರೀಕ್ಷೆಯಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ, ಪ್ರಾವೀಣ್ಯತೆ ಪರೀಕ್ಷೆಗೆ ಪ್ರವೇಶವನ್ನು ನೀಡಲಾಗುವುದಿಲ್ಲ.

ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ್ದು, ದಾಖಲೆ ಪರಿಶೀಲನೆ ಮತ್ತು ಪ್ರಾವೀಣ್ಯತೆ ಪರೀಕ್ಷೆಗೆ ಸಹ ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಆಯ್ಕೆಯಾಗಿದ್ದರೆ ಅಂತಹವರು ಹುದ್ದೆಗಳ ಆಯ್ಕೆಯ ಆದ್ಯತೆಯನ್ನು (Preference) ಲಿಖಿತವಾಗಿ ಬರೆದುಕೊಡುವುದು.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ಅರ್ಹ ಅಭ್ಯರ್ಥಿಗಳ ದಾಖಲೆ ಪರಿಶೀಲನೆಗಾಗಿ ಹಾಗೂ ಪ್ರಾವೀಣ್ಯತೆ ಪರೀಕ್ಷೆಗಾಗಿ(ಅನ್ವಯಿಸುವ ಹುದ್ದೆಗಳಿಗೆ ಮಾತ್ರ) 1:5 ರಂತೆ ಆಯ್ಕೆಯಾಗಿರುವ ಅಭ್ಯರ್ಥಿಗಳ ಮೊದಲನೇ ಪಟ್ಟಿಯನ್ನು www.karnatakabhavan.karnataka.gov.in ರಲ್ಲಿ ದಿನಾಂಕ:14.07.2021 ರಂದು ಪ್ರಕಟಿಸಲಾಗಿತ್ತು.

ಅದರಂತೆ, ಬೆಂಗಳೂರಿನ ಕುಮಾರ ಕೃಪ ಅತಿಥಿ ಗೃಹದಲ್ಲಿ ದಿನಾಂಕ:29.07.2021 ಮತ್ತು ದಿನಾಂಕ:30.07.2021 ರಂದು ಅಭ್ಯರ್ಥಿಗಳ ದಾಖಲೆ ಪರಿಶೀಲನೆ ಮತ್ತು ಪ್ರಾವೀಣ್ಯತೆ ಪರೀಕ್ಷೆಯನ್ನು ನಡೆಸಲಾಗಿತ್ತು ಹಾಗೂ ಆಯ್ಕೆಗೊಂಡಿರುವ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಹಾಗೂ ಕಾಯುವಿಕೆ ಆಯ್ಕೆಪಟ್ಟಿಯನ್ನು ಸಿದ್ದಪಡಿಸಿ ಕಛೇರಿ ಪ್ರಕಟಣೆ ದಿನಾಂಕ:06.08.2021 ರನ್ವಯ ಅಭ್ಯರ್ಥಿಗಳ ಮಾಹಿತಿಗಾಗಿ www.karnatakabhavan.karnataka.gov.in ರಲ್ಲಿ ಪ್ರಕಟಿಸಲಾಗಿದೆ. ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳಿದ್ದರೆ ದಿನಾಂಕ:17.08.2021 ರೊಳಗೆ ಸಲ್ಲಿಸಲು ತಿಳಿಸಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಆಕಾಶವಾಣಿಯ ಬಾನುಲಿ ಕೇಂದ್ರಗಳಲ್ಲಿ "ನಿತ್ಯ ವಿಜ್ಞಾನ" ವಿನೂತನ ಕಾರ್ಯಕ್ರಮ ಪ್ರಸಾರ

ಬೆಂಗಳೂರು, ಆಗಸ್ಟ್ 11 (ಕರ್ನಾಟಕ ವಾರ್ತೆ):

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗಸಂಸ್ಥೆಯಾದ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿಯು (ಕೆಸ್ಟೆಪ್ಸ್) ಆಕಾಶವಾಣಿ ಬೆಂಗಳೂರು ಕೇಂದ್ರದ ಸಹಯೋಗದೊಂದಿಗೆ "ನಿತ್ಯ ವಿಜ್ಞಾನ" ಎಂಬ ವಿನೂತನ ಕಾರ್ಯಕ್ರಮವನ್ನು ಪ್ರಸಾರ ಮಾಡಲಿದೆ.

ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದ ಹೊಸ ಸಂಶೋಧನೆಗಳು, ನಮ್ಮ ನಿತ್ಯ ಜೀವನದಲ್ಲಿ ಕಂಡು ಬರುವ, ನಾವು ಬಳಸುವ ಉಪಕರಣಗಳ ಹಿಂದಿರುವ ವೈಜ್ಞಾನಿಕ ಅಂಶಗಳು, ದೇಶದ ವೈಜ್ಞಾನಿಕ ಸಾಧನೆಗಳ ಬಗೆಗಿನ ಅರಿವು ಮತ್ತು ಜನಸಾಮಾನ್ಯರಲ್ಲಿ ವೈಜ್ಞಾನಿಕ ಮನೋಭಾವವನ್ನು ಮೂಡಿಸುವ ಉದ್ದೇಶದಿಂದ ರೂಪಿತವಾಗಿರುವ ಈ ಕಾರ್ಯಕ್ರಮವು ಆಗಸ್ಟ್ 15 ರಿಂದ ರಾಜ್ಯದ ಆಕಾಶವಾಣಿಯ ಎಲ್ಲಾ ಬಾನುಲಿ ಕೇಂದ್ರಗಳಿಂದ ಪ್ರಾಥಮಿಕ ವಾಹಿನಿಯಿಂದ ಪ್ರತಿದಿನ ಬೆಳಿಗ್ಗೆ 7.45 ಕ್ಕೆ ಎಫ್.ಎಮ್. ರೇನ್‌ಬೋ (101.3 MhZ) ರಾತ್ರಿ 8.00 ಗಂಟೆಗೆ ಪ್ರಸಾರವಾಗಲಿದೆ.

ಕಾರ್ಯಕ್ರಮಗಳಲ್ಲಿ ನಾಡಿನ ಹಿರಿಯ ವಿಜ್ಞಾನ ಲೇಖಕರು ಭಾಗವಹಿಸಲಿದ್ದು, ಪ್ರತಿ ದಿನ ವಿಜ್ಞಾನ ಮತ್ತು ತಂತ್ರಜ್ಞಾನದ ವಿಷಯಗಳನ್ನು ತಿಳಿಸಲಿದ್ದಾರೆ. ಈ ಕಾರ್ಯಕ್ರಮಗಳು ಪ್ರಸಾರಭಾರತಿಯ "ನ್ಯೂಸ್ ಆನ್‌ಏರ್" ಆಪ್ ಮತ್ತು ಕೆಸ್ಟೆಪ್ಸ್ ಹಾಗೂ ಆಕಾಶವಾಣಿ ಬೆಂಗಳೂರು ಇವರ ಯೂಟ್ಯೂಬ್ ಚಾನಲ್‌ನಲ್ಲಿಯೂ ಕೂಡಾ ಲಭ್ಯವಿರುತ್ತವೆ. ಈ ಕಾರ್ಯಕ್ರಮಗಳು ಎರಡು ವರ್ಷಗಳ ಕಾಲ ಅವ್ಯಾಹತವಾಗಿ ಮೂಡಿಬರಲಿದ್ದು, ಇವುಗಳ ನಿರ್ಮಾಣವನ್ನು ಆಕಾಶವಾಣಿ ಬೆಂಗಳೂರಿನ ಕಾರ್ಯಕ್ರಮ ನಿರ್ವಾಹಕರಾದ ಸುಮಂಗಲಾ.ಎಸ್. ಮುಮ್ಮಿಗಟ್ಟಿ ಅವರು ಮಾಡಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಪ್ರಕಟಣೆಗಳನ್ನು ಶೇಕಡ 50% ರಿಯಾಯಿತಿ ದರದಲ್ಲಿ ಮಾರಾಟ

ಬೆಂಗಳೂರು, ಆಗಸ್ಟ್ 11 (ಕರ್ನಾಟಕ ವಾರ್ತೆ):

ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಎಲ್ಲಾ ಪ್ರಕಟಣೆಗಳನ್ನು ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಆಗಸ್ಟ್ 2021ರ ಮಾಹೆಯಲ್ಲಿ ಆಗಸ್ಟ್ 01 ರಿಂದ 31ರವರೆಗೆ ಶೇಕಡ 50% ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುತ್ತಿದೆ. ಆನ್‌ಲೈನ್ ಮೂಲಕವೂ ಶೇಕಡ 50% ರಿಯಾಯಿತಿ ದರದಲ್ಲಿ ಪುಸ್ತಕಗಳನ್ನು ಖರೀದಿಸಬಹುದಾಗಿದ್ದು, ವೆಬ್‌ಸೈಟ್ ವಿಳಾಸ: www.kuvempubhashabharathi.karnataka.gov.in ನಲ್ಲಿ ಪುಸ್ತಕಗಳನ್ನು ಖರೀದಿಸಿ ಓದುಗರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಪ್ರೌಢಶಾಲಾ ಶಿಕ್ಷಕರಿಗಾಗಿ ಆನ್‌ಲೈನ್ ಕಾರ್ಯಾಗಾರ

ಬೆಂಗಳೂರು, ಆಗಸ್ಟ್ 11 (ಕರ್ನಾಟಕ ವಾರ್ತೆ):

ಜವಹರ್ ಲಾಲ್ ನೆಹರು ತಾರಾಲಯವು ಪ್ರೌಢಶಾಲಾ ಶಿಕ್ಷಕರಿಗಾಗಿ ಆಗಸ್ಟ್ 18 ರಂದು ಬೆಳಿಗ್ಗೆ 10.30ರಿಂದ ಮಧ್ಯಾಹ್ನ 12.30 ರವರೆಗೆ ಮೈಕ್ರೋಸಾಫ್ಟ್ ಟೀಮ್ಸ್ ಮೂಲಕ ಆನ್‌ಲೈನ್ ಕಾರ್ಯಾಗಾರವನ್ನು ಆಯೋಜಿಸಲಾಗಿದೆ.

ಪ್ರಸ್ತುತ ಕಾರ್ಯಾಗಾರದಲ್ಲಿ "ಶಬ್ಧ" ಎಂಬ ವಿಷಯದ ಕುರಿತು ತರಗತಿಗಳಲ್ಲಿನ ಬೋಧನೆಗೆ ಉಪಯುಕ್ತವಾಗುವಂತಹ ಪ್ರಾತ್ಯಕ್ಷಿಕೆಗಳ ಮೂಲಕ ಚರ್ಚಿಸಲಾಗುವುದು. ಅಭ್ಯರ್ಥಿಗಳ ಸಂಖ್ಯೆಯನ್ನು 30ಕ್ಕೆ ನಿಗಧಿಪಡಿಸಲಾಗಿದ್ದು, ಮೊದಲು ನೋಂದಾಯಿಸಿದವರಿಗೆ ಆದ್ಯತೆ ನೀಡಲಾಗುವುದು. ಆಸಕ್ತರು ಬುಕ್ ಮೈ ಶೋ ಜಾಲತಾಣದ ಮೂಲಕ ನೋಂದಾಯಿಸಿಕೊಳ್ಳಬಹುದಾಗಿದೆ. ಕಮ್ಮಟದಲ್ಲಿ ಇಯರ್‌ಫೋನ್ ಅಥವಾ ಹೆಡ್‌ಫೋನ್ ಬಳಕೆಯು ಬಹಳ ಉಪಯುಕ್ತವಾಗಬಹುದು.

ಕಾರ್ಯಾಗಾರದ ಆನ್‌ಲೈನ್ ಲಿಂಕ್: https://in.bookmyshow.com/bengaluru/events/sound/ET00313791

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 22379725/22266084 ಹಾಗೂ ವೆಬ್‌ಸೈಟ್ ವಿಳಾಸ: info@taralaya.org ಅಥವಾ www.taralaya.org ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಗ್ರಂಥಪಾಲಕರ ದಿನಾಚರಣೆ-2021

ಬೆಂಗಳೂರು, ಆಗಸ್ಟ್ 11 (ಕರ್ನಾಟಕ ವಾರ್ತೆ):

ಭಾರತೀಯ ಗ್ರಂಥಾಲಯ ವಿಜ್ಞಾನದ ಪಿತಾಮಹರೆಂದೇ ಹೆಸರುವಾಸಿಯಾಗಿರುವ ಪದ್ಮಶ್ರೀ ಶಿಯ್ಯಾಳಿ ರಾಮಾಮೃತ ರಂಗನಾಥನ್ ಅವರು 12 ಆಗಸ್ಟ್ 1892 ರಂದು ತಮಿಳುನಾಡಿನ ತಂಜಾವೂರು ಜಿಲ್ಲೆಯ ಶಿಯ್ಯಾಳಿ ಎಂಬ ಗ್ರಾಮದಲ್ಲಿ ಜನಿಸಿದರು. ಇವರ ತಂದೆ ರಾಮಾಮೃತ ಅಯ್ಯರ್, ತಾಯಿ ಸೀತಾಲಕ್ಷ್ಮಿ. ರಂಗನಾಥನ್ ಗ್ರಂಥಾಲಯ ವಿಜ್ಞಾನ ಕ್ಷೇತ್ರಕ್ಕೆ ನೀಡದೇ ಇರುವ ಸೇವೆಗಳಿಲ್ಲ ಎಂದರೆ ಇದು ಅತಿಶಯೋಕ್ತಿಯಲ್ಲ. ಗ್ರಂಥಾಲಯ ಆಡಳಿತ ಮತ್ತು ನಿರ್ವಹಣೆ, ವರ್ಗೀಕರಣ, ಸೂಚೀಕರಣ, ನಿರ್ದೇಶೀಕರಣ ಸೇವೆ, ಪ್ರಲೇಖನ ಸೇವೆ, ಗ್ರಂಥಾಲಯ ವಿಜ್ಞಾನದ ಪಂಚಸೂತ್ರಗಳು 1. ಗ್ರಂಥಗಳು ಉಪಯೋಗಕ್ಕಾಗಿ 2. ಪ್ರತಿ ಓದುಗನಿಗೆ ತನ್ನ ಗ್ರಂಥ 3 ಪ್ರತಿ ಗ್ರಂಥಕ್ಕೆ ಒಬ್ಬ ಓದುಗ 4. ಓದುಗರ ಸಮಯ ಉಳಿಸಿ 5. ಗ್ರಂಥಾಲಯವು ಒಂದು ಬೆಳೆಯುವ ಶಿಶು. ಹೀಗೆ ಅವರ ಕೊಡುಗೆಗಳನ್ನು ದಾಖಲಿಸಬಹುದು.

ಡಾ. ಎಸ್.ಆರ್. ರಂಗನಾಥನ್ ಅವರು ಎಂದೂ ಪ್ರಶಸ್ತಿಗಳನ್ನು ಅರಸಿ ಹೋದವರಲ್ಲ. ಆದರೆ ಪ್ರಶಸ್ತಿಗಳೇ ಅವರನ್ನು ಹುಡುಕಿಕೊಂಡು ಬಂದಿವೆ. ದೆಹಲಿ ವಿಶ್ವವಿದ್ಯಾಲಯ 1948 ರಲ್ಲಿ ಹಾಗೂ ಪಿಟ್ಸ್ ಬರ್ಗ್ ವಿಶ್ವವಿದ್ಯಾಲಯ 1964ರಲ್ಲಿ ಇವರಿಗೆ ಡಿ.ಲಿಟ್ ಪದವಿ ನೀಡಿ ಗೌರವಿಸಿದವು. 1935ರಲ್ಲಿ ಬ್ರಿಟನ್ ಸರ್ಕಾರ ಇವರಿಗೆ 'ರಾವ್‌ಸಾಹೇಬ' ಎಂಬ ಬಿರುದನ್ನು ನೀಡಿ ಗೌರವಿಸಿತು. 1957ರಲ್ಲಿ ಭಾರತ ಸರ್ಕಾರ "ಪದ್ಮಶ್ರೀ" ಪ್ರಶಸ್ತಿ ನೀಡಿತು. 1970 ರಲ್ಲಿ ಅಮೇರಿಕಾ ಸರ್ಕಾರವು "ಮಾರ್ಗರೇಟ್ ಮ್ಯಾನ್" "ಗ್ರ್ಯಾಂಡ್ ನೈಟ್ ಆಫ್ ದಿ ಪೀಸ್" ಎಂಬ ಗೌರವ ಪ್ರಶಸ್ತಿ ನೀಡಿತು. ಪದ್ಮಶ್ರೀ ಡಾ. ಎಸ್.ಆರ್. ರಂಗನಾಥನ್ ಎನ್ನುವ ಈ ಮಹಾನ್ ಚೇತನ 27ನೇ ಸೆಪ್ಟೆಂಬರ್ 1972ರಂದು ಬೆಂಗಳೂರಿನಲ್ಲಿ ದೈವಾಧೀನರಾದರು. ಭಾರತದಲ್ಲಿ ಸಾರ್ವಜನಿಕ ಗ್ರಂಥಾಲಯಗಳು ಇವತ್ತಿನ ಈ ಉಚ್ಛ್ರಾಯ ಸ್ಥಿತಿಗೆ ಬರಲು ಗ್ರಂಥಾಲಯ ಪಿತಾಮಹರಾದ ಡಾಃ ಎಸ್.ಆರ್. ರಂಗನಾಥನ್ ಅವರು ಹಮ್ಮಿಕೊಂಡ ಕಠಿಣ ಪರಿಶ್ರಮವೇ ಕಾರಣ.

ಡಾ:ಎಸ್.ಆರ್.ರಂಗನಾಥನ್ ಅವರ ಸೇವೆಯನ್ನು ಸ್ಮರಿಸಿ ಕರ್ನಾಟಕ ಸರ್ಕಾರವು ಸರ್ಕಾರದ ಆದೇಶ ಸಂ.ಇಡಿ 154 ಎಲ್‌ಐಬಿ 2007, ಬೆಂಗಳೂರು ದಿನಾಂಕ 7-8-2007ರ ಮೇರೆಗೆ ಡಾ:ಎಸ್.ಆರ್.ರಂಗನಾಥನ್‌ರವರ ಜನ್ಮದಿನವಾದ ಆಗಸ್ಟ್ 12 ನ್ನು "ಗ್ರಂಥಪಾಲಕರ ದಿನ" ಎಂದು ಘೋಷಿಸಿತು. ಅದರಂತೆ ಪ್ರತಿ ವರ್ಷವೂ ಆಗಸ್ಟ್ -12 ರಂದು ಗ್ರಂಥಪಾಲಕರ ದಿನಾಚರಣೆಯನ್ನು ಆಚರಿಸುತ್ತಾ ಬಂದಿದ್ದು, ಗ್ರಂಥಾಲಯ ವಿಜ್ಞಾನದಲ್ಲಿ ಮಹತ್ತರ ಸೇವೆಯನ್ನು ಸಲ್ಲಿಸಿದ ಗ್ರಂಥಪಾಲಕರನ್ನು ಗುರುತಿಸಿ ಅತ್ಯುತ್ತಮ ಗ್ರಂಥಪಾಲಕರ ಪ್ರಶಸ್ತಿಯನ್ನು ಕರ್ನಾಟಕ ಸರ್ಕಾರದ ಪರವಾಗಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ವತಿಯಿಂದ ನೀಡಿ ಗೌರವಿಸಲಾಗುತ್ತಿದೆ.

ಗ್ರಂಥಗಳನ್ನು ಸಾರ್ವಜನಿಕ ಓದುಗರಿಗೆ ಸಮರ್ಪಕವಾಗಿ ಒದಗಿಸುವಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಪಾತ್ರ ಮಹತ್ವವಾದುದ್ದು, ಆದರಿಂದಲೇ ಸಾರ್ವಜನಿಕ ಗ್ರಂಥಾಲಯವನ್ನು " ಶ್ರೀ ಸಾಮಾನ್ಯರ ವಿಶ್ವವಿದ್ಯಾಲಯ" ಎಂದು ಕರೆದಿರುವುದು ನಿಜಕ್ಕೂ ಅಕ್ಷರಶಃ ಅರ್ಥಪೂರ್ಣವಾಗಿದೆ. ಪ್ರಜಾ ಪ್ರಭುತ್ವದ ವ್ಯಾಖ್ಯೆಗೆ ಅತ್ಯಂತ ಹತ್ತಿರವಾಗಿರುವ ಸಾರ್ವಜನಿಕ ಗ್ರಂಥಾಲಯಗಳು ಸಾರ್ವಜನಿಕ ಸಮುದಾಯದಲ್ಲಿ ವಿದ್ಯೆ, ಜ್ಞಾನ, ಓದಿನ ಬಗ್ಗೆ ಆಸಕ್ತಿ ಮತ್ತು ಅಭಿರುಚಿ ಬೆಳೆಸಲು ಉದ್ದೇಶಿಸಿ ಸ್ಥಾಪನೆ ಮಾಡಿರುವ ಮುಕ್ತ ಸಾರ್ವಜನಿಕ ವ್ಯವಸ್ಥೆಯೇ ಈ ಸಾರ್ವಜನಿಕ ಗ್ರಂಥಾಲಯಗಳು.

ಕರ್ನಾಟಕ ಸಾರ್ವಜನಿಕ ಗ್ರಂಥಾಲಯ ಕಾಯ್ದೆ 1965 ರ ಅನ್ವಯ ರಾಜ್ಯದಲ್ಲಿ ಸಮಗ್ರವಾಗಿ ಸಾರ್ವಜನಿಕ ಗ್ರಂಥಾಲಯ ವ್ಯವಸ್ಥೆಯನ್ನು ಕಾರ್ಯ ರೂಪಕ್ಕೆ ತರಲಾಗಿದೆ. ರಾಜ್ಯ ಮಟ್ಟದಲ್ಲಿ ರಾಜ್ಯ ಕೇಂದ್ರ ಗ್ರಂಥಾಲಯ, ಒಂದು ಲಕ್ಷ ಜನ ಸಂಖ್ಯೆಗಿಂತ ಹೆಚ್ಚಿನ ಜನಸಂಖ್ಯೆ ಹೊಂದಿದ ಪ್ರತಿಯೊಂದು ನಗರದಲ್ಲಿ ನಗರ ಕೇಂದ್ರ ಗ್ರಂಥಾಲಯ ಹಾಗೂ ಶಾಖಾ ಗ್ರಂಥಾಲಯಗಳು, ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಕೇಂದ್ರ ಗ್ರಂಥಾಲಯಗಳು, ತಾಲ್ಲೂಕು ಶಾಖಾ ಗ್ರಂಥಾಲಯಗಳು, ಪುರಸಭೆ ಮತ್ತು ಗ್ರಾಮ ಪಂಚಾಯತಿ ಮಟ್ಟದಲ್ಲಿ ಗ್ರಾಮೀಣ ಗ್ರಂಥಾಲಯಗಳು, ಅಲೆಮಾರಿ ಮತ್ತು ಕೊಳಚೆ

ಪ್ರದೇಶ ಸ್ಥಳಗಳಲ್ಲಿ ಅಲೆಮಾರಿ ಹಾಗೂ ಕೊಳಚೆ ಪ್ರದೇಶ ಗ್ರಂಥಾಲಯಗಳು ಹಾಗೂ ಮಕ್ಕಳಿಗಾಗಿ ಸಮುದಾಯ ಮಕ್ಕಳ ಗ್ರಂಥಾಲಯಗಳು ಕಾರ್ಯ ನಿರತವಾಗಿವೆ.

## ಗ್ರಂಥಾಲಯಗಳ ವಿವರ

ರಾಜ್ಯಕೇಂದ್ರ ಗ್ರಂಥಾಲಯ-01, ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯ-01, ಜಿಲ್ಲಾ ಕೇಂದ್ರ ಗ್ರಂಥಾಲಯಗಳು-30, ನಗರ ಕೇಂದ್ರ ಗ್ರಂಥಾಲಯಗಳು-26, ಸಂಚಾರಿ ಗ್ರಂಥಾಲಯಗಳು-12, ಶಾಖಾ ಗ್ರಂಥಾಲಯಗಳು-533, ಸೇವಾ ಕೇಂದ್ರಗಳು-145, ವಾಚನಾಲಯಗಳು-83, ಗ್ರಾಮ ಪಂಚಾಯತಿ ಗ್ರಂಥಾಲಯಗಳು-5766, ಕೊಳಚೆ ಪ್ರದೇಶದ ಗ್ರಂಥಾಲಯಗಳು-100, ಅಲೆಮಾರಿ ಗ್ರಂಥಾಲಯಗಳು-127, ಮಕ್ಕಳ ಗ್ರಂಥಾಲಯಗಳು-06, ಸಮುದಾಯ ಮಕ್ಕಳ ಕೇಂದ್ರ ಗ್ರಂಥಾಲಯಗಳು-31 ಮತ್ತು ಗ್ರಂಥಾಲಯ ತರಬೇತಿ ಶಾಲೆಗಳು-05 ಹೀಗೆ ಒಟ್ಟು 6866 ಗ್ರಂಥಾಲಯಗಳು ರಾಜ್ಯಾದ್ಯಂತ ಕಾರ್ಯ ನಿರ್ವಹಿಸುತ್ತಿವೆ.

ಕೋವಿಡ್-19 ಸೋಂಕನ್ನು ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲಾ / ನಗರ ಕೇಂದ್ರ ಗ್ರಂಥಾಲಯಗಳಲ್ಲಿ ಸರ್ಕಾರದ ನಿರ್ದೇಶನದಂತೆ ಆನ್ ಲೈನ್ ಮೂಲಕ ಹಲವಾರು ಕಾರ್ಯಕ್ರಮಗಳನ್ನು ಈ ಕೆಳಗಿನಂತೆ ಹಮ್ಮಿಕೊಂಡಿದೆ. ಗ್ರಂಥಗಳು ಹಾಗೂ ಗ್ರಂಥಾಲಯಗಳ ಮಹತ್ವ ಕುರಿತು ವಿಚಾರ ಗೋಷ್ಠಿ, ಉಪನ್ಯಾಸ, ಮಕ್ಕಳಿಗೆ ಚರ್ಚಾ ಸ್ಪರ್ದೆ, ಭಾವಗೀತೆ, ಜಾನಪದ ಗೀತೆ, ರಸಪ್ರಶ್ನೆ ಕಾರ್ಯಕ್ರಮ ಮತ್ತು ಆಶು - ಭಾಷಣ ಸ್ಪರ್ದೆಗಳನ್ನು ಹಮ್ಮಿಕೊಳ್ಳಲಾಗಿದೆ. ಸದಸ್ಯತ್ವ ಆಂದೋಲನ ಡಿಜಿಟಲ್ ಗ್ರಂಥಾಲಯಕ್ಕೆ ಹೆಚ್ಚಿನ ಸದಸ್ಯರನ್ನು ನೋಂದಾಯಿಸುವ ಮೂಲಕ ಓದುಗರನ್ನು ಉತ್ತೇಜಿಸುವುದು, ಗ್ರಂಥಾಲಯಗಳಲ್ಲಿ ನೂತನ ಪಠ್ಯ ಪುಸ್ತಕ , ಪರಾಮರ್ಶನ ಮತ್ತು ವಿವಿಧ ಸ್ಪರ್ದಾತ್ಮಕ ಪುಸ್ತಕಗಳ ಪ್ರದರ್ಶನ ಏರ್ಪಡಿಸುವ ಮೂಲಕ ಯುವ ಜನತೆಯನ್ನು ಗ್ರಂಥಾಲಯದೆಡೆಗೆ ಆಕರ್ಷಿಸಲಾಗುತ್ತಿದೆ.

ದೇಶದಲ್ಲಿಯೇ ಪ್ರಪ್ರಥಮವಾಗಿ ಕರ್ನಾಟಕ ರಾಜ್ಯದಲ್ಲಿ ಜಿಲ್ಲಾ / ನಗರ / ತಾಲ್ಲೂಕು ಒಟ್ಟು 372 ಗ್ರಂಥಾಲಯಗಳಲ್ಲಿ ಡಿಜಿಟಲ್ ಗ್ರಂಥಾಲಯ ಸೇವೆಯನ್ನು ನೀಡಲಾಗುತ್ತಿದೆ. ಇಲ್ಲಿಯವರೆಗೆ ಒಟ್ಟು 98,36,267 ಜನ ಸದಸ್ಯರಾಗಿ ನೋಂದಾಯಿಸಿಕೊಂಡಿರುತ್ತಾರೆ ಹಾಗೂ 18,72,954 ಪುಸ್ತಕ ಹಾಗೂ ಇ-ಕಂಟೆಂಟ್ ಗಳನ್ನು ಉಪಯೋಗಿಸುತ್ತಿದ್ದಾರೆ.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯು ಗುಣಮಟ್ಟ ಮಾಪನ ಕೇಂದ್ರಗಳ ವಾಯು ಗುಣಮಟ್ಟ ಸೂಚ್ಯಂಕ

ಬೆಂಗಳೂರು, ಆಗಸ್ಟ್ 11 (ಕರ್ನಾಟಕ ವಾರ್ತೆ):

**ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 11.8.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 36 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 56 | ತೃಪ್ತಿಕರ | $NO_2$ |
| 3 | ಕವಿಕ, ಮೈಸೂರುರಸ್ತೆ | 72 | ತೃಪ್ತಿಕರ | $PM_{2.5}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 40 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 101 | ಸಾಧಾರಣ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 74 | ತೃಪ್ತಿಕರ | $PM_{10}$, |

| | | | | |
|---|---|---|---|---|
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 58 | ತೃಪ್ತಿಕರ | $PM_{10}$ |
| **(11.8.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 54 | ಉತ್ತಮ | $PM_{10}$ |
| 9 | ಪೀಣ್ಯ | 62 | ತೃಪ್ತಿಕರ | $PM_{10}$ |
| 10 | ಬಿಟಿಎಂ ಲೇಔಟ್ | 76 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 11.8.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 36 | Good | $PM_{10}$ |
| 2 | Jayanagar 5th Block, Shalini ground | 56 | Satisfactory | $NO_2$ |
| 3 | KAVIKA, Mysore Road | 72 | Satisfactory | $PM_{2.5}$ |
| 4 | Rajeev Gandhi Institute of Chest Disease, NIMHANS, Hombegowda Nagar | 40 | Good | $PM_{10}$ |
| 5 | HSR Layout, near Central Silkboard | 101 | Moderate | $PM_{10}$ |
| 6 | City Railway Station, Magestic, Bengaluru | 74 | Satisfactory | $PM_{10,}$ |
| 7 | Saneguruvanahalli, NisargaBhavan, KSPCB, Shivanagara | 58 | Satisfactory | $PM_{10}$ |

| (11.8.2021 at 11.05 AM) | | | | |
|---|---|---|---|---|
| 8 | BWSSB, Kadabesanahalli | 54 | Good | $PM_{10}$ |
| 9 | Peenya | 62 | Satisfactory | $PM_{10}$ |
| 10 | BTM Layout | 76 | Satisfactory | CO |

* Data not available

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |